# ಕಾರ್ಯದರ್ಶಿಗೆ ಷೋಕಾಸ್ ನೋಟಿಸ್ ನೀಡಿದ ಸಭಾಪತಿ

ಪ್ರಜಾವಾಣಿ ವಾರ್ತೆ 19-12-20


ಮಹಾಲಕ್ಷ್ಮಿ


ಪ್ರತಾಪಚಂದ್ರ ಶೆಟ್ಟಿ

ಬೆಂಗಳೂರು: ಡಿಸೆಂಬರ್ 15ರಂದು ನಡೆದ ಅಧಿವೇಶನದಲ್ಲಿ ಕರ್ತವ್ಯಲೋಪ ಎಸಗಿದ ಮತ್ತು ಬೇಜವಾಬ್ದಾರಿಯಿಂದ ವರ್ತಿಸಿದ ಆರೋಪದ ಮೇಲೆ ವಿಧಾನ ಪರಿಷತ್ ಕಾರ್ಯದರ್ಶಿ ಕೆ.ಆರ್. ಮಹಾಲಕ್ಷ್ಮಿ ಅವರಿಗೆ ಸಭಾಪತಿ ಕೆ. ಪ್ರತಾಪಚಂದ್ರ ಶೆಟ್ಟಿ, ಷೋಕಾಸ್ ನೋಟಿಸ್ ನೀಡಿದ್ದಾರೆ.

ಬುಧವಾರವೇ ನೋಟಿಸ್ ನೀಡಿರುವ ಸಭಾಪತಿ, ದಾಖಲೆಗಳೊಂದಿಗೆ 48 ಗಂಟೆಗಳೊಳಗೆ ಉತ್ತರ ನೀಡುವಂತೆ ಸೂಚಿಸಿದ್ದಾರೆ.

'ಡಿ.15ರಂದು ಕೋರಂ ಬೆಲ್ ಮುಗಿಯುವ ಮುನ್ನವೇ ಉಪ ಸಭಾಪತಿ ಪೀಠ ಏರಿದ್ದರು. ನಾನು ಸದನಕ್ಕೆ ಬರದಂತೆ ಬಾಗಿಲು ಮುಚ್ಚಿ ಅಡ್ಡಿಪಡಿಸಲಾಗಿತ್ತು. ನಿಯಮಬಾಹಿರವಾಗಿ ಸಭಾಪತಿಯವರ ಪೀಠ ಏರಿದ್ದ ಉಪ ಸಭಾಪತಿಯವರಿಗೆ ಸರಿಯಾಗಿ ಮಾಹಿತಿ ನೀಡದೆ ಸದನ ಮುಂದುವರಿಸುವ ಚಿತಾವಣೆಯಂತೆ ದಾಖಲೆಗಳನ್ನು ಒದಗಿಸಿರುವುದು ಸೇರಿದಂತೆ ನಿಮ್ಮ ಕರ್ತವ್ಯ ನಿರ್ಲಕ್ಷ್ಯಕ್ಕೆ ಸಾಕ್ಷಿಯಾದ ಹಲವು ಅಂಶಗಳನ್ನು ಗಮನಿಸಿದ್ದೇನೆ' ಎಂದು ಸಭಾಪತಿ ನೋಟಿಸ್‌ನಲ್ಲಿ ಉಲ್ಲೇಖಿಸಿದ್ದಾರೆ.

'ನಿಮ್ಮ ವರ್ತನೆಯು ವಿಧಾನಮಂಡಲದ ನೌಕರನಿಗೆ ತಕ್ಕುದಲ್ಲದ ರೀತಿಯಲ್ಲಿದೆ. ನಿಯಮಬಾಹಿರ ನಡವಳಿಕೆ, ಕರ್ತವ್ಯ ನಿರ್ಲಕ್ಷ್ಯ, ಬೇಜವಾಬ್ದಾರಿ ಮತ್ತು ಸಕ್ಷಮ ಪ್ರಾಧಿಕಾರದ ಅನುಮತಿ ಇಲ್ಲದೆ ಅಧಿಕಾರ ವ್ಯಾಪ್ತಿ ಮೀರಿರುವ ನಿಮ್ಮ ವಿರುದ್ಧ ಕರ್ನಾಟಕ ನಾಗರಿಕ ಸೇವಾ ನಿಯಮಾವಳಿ ಅಡಿಯಲ್ಲಿ ಏಕೆ ಕ್ರಮ ಜರುಗಿಸಬಾರದು' ಎಂದು ನೋಟಿಸ್‌ನಲ್ಲಿ ಪ್ರಶ್ನಿಸಿದ್ದಾರೆ.

'ಡಿ.15ರಂದು ನಾನು ಸದನಕ್ಕೆ ಬರದಂತೆ ತಡೆದಿರುವುದು ಮತ್ತು ಕಲಾಪಗಳ ನಿಯಮಾವಳಿಗಳನ್ನು ಗಾಳಿಗೆ ತೂರಿ ವ್ಯತಿರಿಕ್ತವಾಗಿ ವರ್ತಿಸಿರುವ ಘಟನೆ ಕುರಿತು ಸಮೂಹ ಮಾಧ್ಯಮಗಳಲ್ಲಿ ವ್ಯಾಪಕ ಟೀಕೆ ವ್ಯಕ್ತವಾಗಿದೆ. ಶತಮಾನದ ಇತಿಹಾಸವುಳ್ಳ ವಿಧಾನ ಪರಿಷತ್ತಿನ ಗೌರವ, ಘನತೆ ಮತ್ತು ಸಂಪ್ರದಾಯಕ್ಕೆ ಈ ಘಟನೆಯಿಂದ ಧಕ್ಕೆಯಾಗಿದೆ' ಎಂದು ಸಭಾಪತಿ ಪತ್ರದಲ್ಲಿ ಹೇಳಿದ್ದಾರೆ.

ಪರಿಷತ್ ಕಾರ್ಯದರ್ಶಿ ಷೋಕಾಸ್ ನೋಟಿಸ್‌ಗೆ ಉತ್ತರ ನೀಡಿರುವ ಮತ್ತು ಡಿ.15ರ ಘಟನೆ ಕುರಿತು ವರದಿ ಸಲ್ಲಿಸಿರುವ ಬಗ್ಗೆ ಯಾವುದೇ ಮಾಹಿತಿ ಲಭ್ಯವಾಗಿಲ್ಲ.

ಸ್ವಗ್ರಾಮದಲ್ಲಿರುವ ಸಭಾಪತಿ ಪ್ರತಾಪಚಂದ್ರ ಶೆಟ್ಟಿ ಅವರು, ಈ ಸಂಬಂಧ ತಮಗೆ ಇನ್ನೂ ಮಾಹಿತಿ ಇಲ್ಲ ಎಂದು ತಿಳಿಸಿದರು.

Bengaluru